ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ಬೆಳಗಾವಿ ಜಿಲ್ಲೆಯ ಹುಕ್ಕೇರಿ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿರುವ ಡಯಾಲಿಸೀಸ್ ಘಟಕ ದುರಸ್ಥಿಗೊಂಡಿದ್ದು ಇದರಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಯ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

508 (689) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹುಕ್ಕೇರಿ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಡಯಾಲಿಸೀಸ್ ಘಟಕವನ್ನು ಯಾವಾಗ ಆರಂಭಿಸಲಾಗಿದೆ ;

(ಆ) ಈ ಡಯಾಲಿಸೀಸ್ ಘಟಕದ ನಿರ್ವಹಣೆಯನ್ನು ಯಾರಿಗೆ ವಹಿಸಲಾಗಿದೆ ;

(ಇ) ವಿದ್ಯುತ್ ಹಾಗೂ ನೀರಿನ ಸರಬರಾಜಿನ ಕೊರತೆಯಿಂದ ಈ ಯಂತ್ರವು ಸ್ಥಗಿತಗೊಂಡಿದ್ದು, ಇದರಿಂದ ಸಾರ್ವಜನಿಕರು

ತೊಂದರೆಗೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ನಿರಂತರ ನೀರು ಹಾಗೂ ವಿದ್ಯುತ್ತಿನ ಸರಬರಾಜು ಮಾಡುವ ನಿಟ್ಟಿನಲ್ಲಿ ಹಾಗೂ ನಿರ್ವಾಹಕರ ನಿಷ್ಕಾಳಜಿಯ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?